# All India Radio: Bangalore
# National Bulletin In Kannada
# 07.04.2024 01.10 p.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
# 07.04.2024 01.10 p.m.
*******************

ಮುಖ್ಯಾಂಶಗಳು

1. ಲೋಕಸಭಾ ಚುನಾವಣೆ: ಬಿಹಾರ, ಮಧ್ಯಪ್ರದೇಶ, ಜಲ್ಪೈ ಗುರಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಚುನಾವಣಾ ರ್‍ಯಾಲಿಯನ್ನುದ್ದೇಶಿ ಭಾಷಣ
2. ಜನ ಜಾತ್ರಾ ಹೆಸರಿನಲ್ಲಿ ಕಾಂಗ್ರೆಸ್ ಚುನಾವಣಾ ಪ್ರಚಾರ ಆರಂಭ
3. ಇಂದು ವಿಶ್ವ ಆರೋಗ್ಯ ದಿನ: ಜಗತ್ತಿನಲ್ಲೆಡೆ ಆರೋಗ್ಯ ರಕ್ಷಣೆ ಕುರಿತು ಜಾಗೃತಿ
4. ಐಪಿಎಲ್ ಟಿ-20 ಕ್ರಿಕೆಟ್ : ಇಂದು ಮುಂಬೈ ಇಂಡಿಯನ್ಸ್ – ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ – ಗುಜರಾತ್ ಟೈಟನ್ಸ್ ಮುಖಾಮುಖಿ

*******************

ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಬಿಹಾರದ ನವಾಡಾದಲ್ಲಿ ಇಂದು ಚುನಾವಣಾ ರ್‍ಯಾಲಿ ನಡೆಸಿದರು.

ಎನ್‌ಡಿಎ ಅಭ್ಯರ್ಥಿಯನ್ನು ಬೆಂಬಲಿಸಿ ಪ್ರಧಾನಿ ಅವರು, ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದಾರೆ. ಬಿಜೆಪಿ ನಾಯಕರೊಂದಿಗೆ, ಎನ್‌ಡಿಎ ದ ಇತರ ಘಟಕ ಪಕ್ಷಗಳ ಸದಸ್ಯರೂ ಸಹ ರ್‍ಯಾಲಿಯಲ್ಲಿ ಭಾಗವಹಿಸಿದ್ದಾರೆ.

ನವಾಡಾ ಸಂಸದೀಯ ಕ್ಷೇತ್ರದಿಂದ ಬಿಜೆಪಿ ಹಿರಿಯ ಮುಖಂಡ ಮತ್ತು ಮಾಜಿ ಕೇಂದ್ರ ಸಚಿವ ಡಾ.ಸಿ.ಪಿ.ಠಾಕೂರ್ ಅವರ ಪುತ್ರ ವಿವೇಕ್ ಠಾಕೂರ್ ಅವರನ್ನು ಪಕ್ಷ ಕಣಕ್ಕಿಳಿಸಿದೆ.

ಮೊದಲ ಹಂತದ ಲೋಕಸಭಾ ಚುನಾವಣೆಯಲ್ಲಿ ಗಯಾ, ಔರಂಗಾಬಾದ್ ಮತ್ತು ಜಮುಯಿ ಜೊತೆಗೆ ನವಾಡಾ ಕ್ಷೇತ್ರದಲ್ಲಿ ಏಪ್ರಿಲ್ 19 ರಂದು ಮತದಾನ ನಡೆಯಲಿದೆ.

ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಮಧ್ಯಪ್ರದೇಶದ ಜಬಲ್ಪುರದಲ್ಲಿ ಇಂದು ಪಕ್ಷದ ಪರ ಪ್ರಚಾರಕ್ಕೆ ಚಾಲನೆ ನೀಡಲಿದ್ದಾರೆ.

ಸಂಜೆ 6 ಗಂಟೆಗೆ ಭಗತ್ ಸಿಂಗ್ ಚೌಕ್ ನಿಂದ ಜಬಲ್ ಪುರದ ಶಂಕರಾಚಾರ್ಯ ಚೌಕ್ ವರೆಗೆ ಸುಮಾರು ಒಂದು ಗಂಟೆಯ ಕಾಲ ರೋಡ್ ಶೋ ನಡೆಸಲಿದ್ದಾರೆ.

*******************

ಅಲ್ಲದೆ ಕೋಲ್ಕತ್ತಾದ ಜಲ್ಪೈಗುರಿಯ ಧುಪ್ಗುರಿ ಬ್ಲಾಕ್‌ನ ಜುಮುರ್‌ನಲ್ಲಿ ಇಂದು ಮಧ್ಯಾಹ್ನದ ವೇಳೆಗೆ ಅವರು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಈ ಸಭೆಯಲ್ಲಿ ಜಲ್ಪೈಗುರಿಯ ಅಭ್ಯರ್ಥಿ ಡಾ.ಜಯಂತ ರಾಯ್, ಅಲಿಪುರ್ದೌರ್‌ನ ಬಿಜೆಪಿ ಅಭ್ಯರ್ಥಿ ಮನೋಜ್ ತಿಗ್ಗಾ ಮತ್ತು ಪಕ್ಷದ ಡಾರ್ಜಿಲಿಂಗ್ ಅಭ್ಯರ್ಥಿ ರಾಜು ಬಿಸ್ತಾ ಮತ್ತು ಇತರ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿರುವುದಾಗಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

*******************

ಹೈದರಾಬಾದ್ ನಿಂದ 40 ಕಿಲೋಮೀಟರ್ ದೂರದಲ್ಲಿರುವ ರಂಗಾರೆಡ್ಡಿ ಜಿಲ್ಲೆ ತುಕ್ಕುಗುಡದಲ್ಲಿ ನಿನ್ನೆ ಸಂಜೆ 'ಜನ ಜಾತ್ರಾ' ಎಂಬ ಸಾರ್ವಜನಿಕ ಸಭೆಯೊಂದಿಗೆ ಕಾಂಗ್ರೆಸ್ ಪಕ್ಷ ತೆಲಂಗಾಣದಿಂದ ತನ್ನ ಸಾರ್ವತ್ರಿಕ ಚುನಾವಣಾ ಪ್ರಚಾರವನ್ನು ಪ್ರಾರಂಭಿಸಿತು.

ತೆಲುಗಿನಲ್ಲಿ ಪಕ್ಷದ ಚುನಾವಣಾ ಪ್ರಣಾಳಿಕೆಯನ್ನು ಅನಾವರಣಗೊಳಿಸಿದ ನಂತರ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ತೆಲಂಗಾಣದಲ್ಲಿ ವಿಧಾನಸಭಾ ಚುನಾವಣೆಯ ಸಮಯದಲ್ಲಿ ನೀಡಿದ ಭರವಸೆಗಳಿಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿದೆ ಎಂದು ಪ್ರತಿಪಾದಿಸಿದರು.

ತೆಲಂಗಾಣದಲ್ಲಿ ಕಾಂಗ್ರೆಸ್ ಸರ್ಕಾರ ಈಗಾಗಲೇ 30 ಸಾವಿರ ಉದ್ಯೋಗಗಳಿಗೆ ಅನುಕೂಲ ಮಾಡಿಕೊಟ್ಟಿದೆ ಎಂದು ರಾಹುಲ್ ಗಾಂಧಿ ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿನ ನಿರುದ್ಯೋಗಿಗಳಿಗೆ ತರಬೇತಿ ಮತ್ತು ವರ್ಷಕ್ಕೆ ಒಂದು ಲಕ್ಷ ರೂಪಾಯಿ ಸ್ಟೈಫಂಡ್ ನೀಡುವ ಉಪಕ್ರಮಗಳನ್ನು ಅವರು ವಿವರಿಸಿದರು.

*******************

ಸಾರ್ವತ್ರಿಕ ಚುನಾವಣೆ 2024 ಘೋಷಣೆಯಾದ ನಂತರ ಕೇವಲ 20 ದಿನಗಳಲ್ಲಿ ಸುವಿಧಾ ಪೋರ್ಟಲ್‌ನಲ್ಲಿ 73 ಸಾವಿರಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

ಚುನಾವಣಾ ಪ್ರಚಾರದ ಅವಧಿಯ ಮಹತ್ವವನ್ನು ಗುರುತಿಸಿ, ಪಕ್ಷಗಳು ಮತ್ತು ಅಭ್ಯರ್ಥಿಗಳು ಮತದಾರರನ್ನು ತಲುಪಲು ಸುವಿಧಾ ಪೋರ್ಟಲ್ ನೆರವಾಗಿದೆ.

ಈ ಪೋರ್ಟಲ್ ಚುನಾವಣೆಗೆ ಸಂಬಂಧಿಸಿದ ಅನುಮತಿ, ಸಭೆ ಸಮಾವೇಶಗಳ ಅನುಮತಿ ಪಡೆಯಲು ನೆರವಾಗುತ್ತಿದೆ. ಅಲ್ಲದೆ, ಬಹಿರಂಗ ಸಭೆಗಳು, ತಾತ್ಕಾಲಿಕ ಪಕ್ಷದ ಮತ್ತು ಅಭ್ಯರ್ಥಿಗಳ ಕಚೇರಿ ತೆರೆಯಲು, ಮನೆಮನೆಗೆ ಪ್ರಚಾರ ನಡೆಸಲು, ಪ್ರಚಾರ ವಾಹನಗಳು, ಹೆಲಿಕಾಪ್ಟರ್‌ಗಳು ಸೇರಿದಂತೆ ವಾಹನಗಳ ಪರವಾನಿಗೆ ಮತ್ತು ಕರಪತ್ರಗಳ ಮುದ್ರಿಸುವ ಕುರಿತು ಅನುಮತಿ ಪಡೆಯಲು ಪೋರ್ಟಲ್ ಸಹಕಾರಿಯಾಗಿದೆ.

ಈಗಾಗಲೇ 44 ಸಾವಿರದ 600 ಕ್ಕೂ ಹೆಚ್ಚು ಮನವಿಗಳಿಗೆ ಪೋರ್ಟಲ್ ಮೂಲಕ ಅನುಮತಿ ನೀಡಲಾಗಿದೆ. ಇದು ಪಾರದರ್ಶಕವಾಗಿದ್ದು, ಚುನಾವಣೆ ನಿರ್ವಹಣಾ ಕಾರ್ಯಗಳಿಗೆ ಉತ್ತೇಜನಕಾರಿಯಾಗಿದೆ.

ದೇಶದಲ್ಲಿ ಈವರೆಗೆ 11 ಸಾವಿರದ 200 ಅರ್ಜಿಗಳು ತಿರಸ್ಕೃತಗೊಂಡಿವೆ. ಆದರೆ, ಕೇವಲ 20 ದಿನಗಳಲ್ಲಿ 73 ಸಾವಿರಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತಗೊಂಡಿವೆ ಎಂದು ಚುನಾವಣಾ ಆಯೋಗ ತಿಳಿಸಿದೆ.

*******************

ಭಾರತದ ಪ್ರಜಾತಂತ್ರ, ಆರಂಭದಿಂದಲೂ ಸಾರ್ವತ್ರಿಕ ವಯಸ್ಕ ಮತದಾನಕ್ಕೆ ಹೆಸರಾಗಿದೆ. ಮತದಾನ ಪ್ರಕ್ರಿಯೆ ಭಾಗಿದಾರಿಕೆಯಲ್ಲಿ ಲಿಂಗಸಮಾನತೆಯ ಪಯಣ ವಿಶಿಷ್ಟವಾಗಿದೆ.

1952ರಲ್ಲಿ ನಡೆದ ಮೊದಲ ಸಾರ್ವತ್ರಿಕ ಚುನಾವಣೆಯಲ್ಲಿ ಸುಮಾರು 80 ಲಕ್ಷ ಮಹಿಳಾ ಮತದಾರರಿದ್ದರು. ಇವರಲ್ಲಿ 2 ಲಕ್ಷ 80 ಸಾವಿರ ಮತದಾರರಿಗೆ ಗುರುತಿನ ವಿವರ ಇರಲಿಲ್ಲ. ಇದು ಚುನಾವಣಾ ಆಯೋಗಕ್ಕೆ ಒಂದು ಸವಾಲಾಗಿತ್ತು. ಅನೇಕ ಮಹಿಳೆಯರು ಆಗಿನ ಸಂಪ್ರದಾಯದಂತೆ ತಮ್ಮ ಕುಟುಂಬದ ಪುರುಷ ಸದಸ್ಯರ ಹೆಸರಿನ ಅಡಿ ತಮ್ಮ ಹೆಸರನ್ನು ನೊಂದಾವಣೆ ಮಾಡಿಸಿದ್ದರು ಆದರೆ ಈಗ ಚಿತ್ರಣ ಬದಲಾಗಿದೆ. 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 67.18 ರಷ್ಟು ದಾಖಲೆಯ ಸಂಖ್ಯೆ ಮಹಿಳೆಯರು ಮತದಾನ ಮಾಡಿದ್ದರು. ಚುನಾವಣಾ ಆಯೋಗ, ಚುನಾವಣೆಯಲ್ಲಿ ಎಲ್ಲ ಮತದಾರರ ಪಾಲ್ಗೊಳ್ಳುವಿಕೆಯನ್ನು ಖಾತರಿಪಡಿಸಲು ವ್ಯಾಪಕ ಕ್ರಮಕೈಗೊಂಡ ಕಾರಣ ಇದು ಸಾಧ್ಯವಾಗಿತ್ತು. ಬುಡಕಟ್ಟು ಜಿಲ್ಲೆಗಳಲ್ಲಿ ಮಹಿಳಾ ಮತದಾರರ ರ್‍ಯಾಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಮದರ್ ಇಂಡಿಯಾ ಮೊದಲಾದ ಕಾರ್ಯಕ್ರಮಗಳ ಮೂಲಕ ಮಹಿಳಾ ಮತದಾರರಿಗೆ ಶಿಕ್ಷಣ ನೀಡಲಾಗಿದೆ.

2024 ಲೋಕಸಾಭಾ ಚುನಾವಣೆ ಭಾರತದ ಪ್ರಜಾತಂತ್ರ ಇತಿಹಾಸದಲ್ಲಿ ಅತಿ ಪ್ರಮುಖವಾದ ಘಟ್ಟವಾಗಿದೆ. 47 ಕೋಟಿ 1 ಲಕ್ಷ ಮಹಿಳಾ ಮತದಾರರು ಮತದಾನಕ್ಕೆ ಹೆಸರು ನೊಂದಾಯಿಸಿಕೊಂಡಿದ್ದಾರೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ.

*******************

ಕೋಝಿಕ್ಕೋಡ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಂ.ಟಿ.ರಮೇಶ್ ಪರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ರೋಡ್ ಶೋ ನಡೆಸಿದರು.

ರೋಡ್ ಶೋ ಕೊನೆಯಲ್ಲಿ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ, ಯುವಕರು, ಮಹಿಳೆಯರು, ರೈತರು ಮತ್ತು ಕಟ್ಟಕಡೆಯ ವರ್ಗವೂ ಸೇರಿದಂತೆ ಸಮಾಜದ ಎಲ್ಲಾ ವರ್ಗಗಳ ಬಗ್ಗೆ ಕಾಳಜಿ ವಹಿಸಿದ್ದಾರೆ ಎಂದು ಹೇಳಿದರು.

*******************

ಇಂದು ವಿಶ್ವ ಆರೋಗ್ಯ ದಿನ. ಆರೋಗ್ಯ ಕುರಿತು ಜಾಗೃತಿ ಮೂಡಿಸಲು ಪ್ರತಿ ವರ್ಷ ಏಪ್ರಿಲ್ 7 ರಂದು ವಿಶ್ವ ಆರೋಗ್ಯ ದಿನವನ್ನಾಗಿ ಆಚರಿಸಲಾಗುತ್ತಿದೆ.

ವಿಶ್ವ ಆರೋಗ್ಯ ಸಂಸ್ಥೆ–ಡಬ್ಲ್ಯುಎಚ್‌ಓ ಈ ವರ್ಷದ ಘೋಷವಾಕ್ಯವನ್ನು 'ನನ್ನ ಆರೋಗ್ಯ, ನನ್ನ ಹಕ್ಕು' ಎಂದು ಘೋಷಿಸಿದೆ. ಕನಿಷ್ಠ 4.5 ಶತಕೋಟಿ ಜನರಿಗೆ ಅಗತ್ಯ ಆರೋಗ್ಯ ಸೇವೆಗಳ ಗಂಭೀರ ಕೊರತೆಯನ್ನು ಪರಿಹರಿಸಲು ಈ ಘೋಷಣೆ ಮಾಡಲಾಗಿದೆ.

140 ಕ್ಕೂ ಹೆಚ್ಚು ದೇಶಗಳು ತಮ್ಮ ಸಂವಿಧಾನದಲ್ಲಿ ಆರೋಗ್ಯವನ್ನು ಮಾನವ ಹಕ್ಕು ಎಂದು ಗುರುತಿಸಿದ್ದರೂ, ಅನೇಕ ರಾಷ್ಟ್ರಗಳು ಆರೋಗ್ಯ ರಕ್ಷಣೆ ಕುರಿತ ಕಾನೂನುಗಳನ್ನು ಅಂಗೀಕರಿಸುತ್ತಿಲ್ಲ ಮತ್ತು ಆಚರಣೆಗೆ ತರುತ್ತಿಲ್ಲ ಎಂದು ಡಬ್ಲ್ಯುಎಚ್‌ಓ ತಿಳಿಸಿದೆ.

ಈ ದಿನವು ಗುಣಮಟ್ಟದ ಆರೋಗ್ಯ ಸೇವೆಗಳು, ಶಿಕ್ಷಣ ಮತ್ತು ಮಾಹಿತಿಯ ಪ್ರವೇಶದ ಬಗ್ಗೆ ಜಾಗೃತಿ ಮೂಡಿಸುತ್ತದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿದೆ.

ವಿಶ್ವ ಆರೋಗ್ಯ ದಿನವನ್ನು ಮೊದಲ ಬಾರಿಗೆ 1950 ರಲ್ಲಿ ಆಚರಿಸಲಾಯಿತು. ಅಂದಿನಿಂದ ಸಂಸ್ಥೆಯ ಸ್ಥಾಪನೆಯನ್ನು ಗುರುತಿಸಲು ಮತ್ತು ಆರೋಗ್ಯದ ಪ್ರಾಮುಖ್ಯತೆಯ ಬಗ್ಗೆ ಜಾಗತಿಕ ಗಮನ ಸೆಳೆಯಲು ಈ ದಿನವನ್ನು ಆಚರಿಸಲಾಗುತ್ತಿದೆ.

*******************

2022 ರ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ –ಎನ್‌ಐಎ ಪಶ್ಚಿಮ ಬಂಗಾಳದ ಪೂರ್ವ ಮೇದಿನಿಪುರ ಜಿಲ್ಲೆ ಭೂಪತಿನಗರದಿಂದ ಇಬ್ಬರು ಪ್ರಮುಖ ಶಂಕಿತರನ್ನು ಬಂಧಿಸಿದೆ.

ಭೂಪತಿನಗರ ಸ್ಫೋಟ ಪ್ರಕರಣದ ತನಿಖೆ ಪ್ರಗತಿಯಲ್ಲಿ, ಇಬ್ಬರು ಪ್ರಮುಖ ಸಂಚುಕೋರರಾದ ಬಲೈ ಚರಣ್ ಮೈಟಿ ಮತ್ತು ಮನೋಬ್ರತಾ ಜನಾ ಎಂಬುವರನ್ನು ಐದು ಸ್ಥಳಗಳಲ್ಲಿ ವ್ಯಾಪಕ ಶೋಧದ ನಂತರ ಬಂಧಿಸಲಾಗಿದೆ ಎಂದು ಎನ್‌ಐಎ ತಿಳಿಸಿದೆ.

2022ರ ಡಿಸೆಂಬರ್ 3 ರಂದು ನಡೆದ ಸ್ಫೋಟದಲ್ಲಿ ಮೂವರು ಸಾವನ್ನಪ್ಪಿದ್ದರು.

*******************

ಮಹಾರಾಷ್ಟ್ರ, ಮಧ್ಯಪ್ರದೇಶ, ಛತ್ತೀಸ್ ಗಢ, ಪಶ್ಚಿಮ ಬಂಗಾಳ ಮತ್ತು ಒಡಿಶಾದ ಕೆಲವು ಭಾಗಗಳಲ್ಲಿಂದು ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ.

ದೇಶದ ವಿವಿಧ ಭಾಗಗಳಲ್ಲಿ ಗುಡುಗು, ಮಿಂಚು, ಗಾಳಿಯೊಂದಿಗೆ ಮಧ್ಯಮ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ಈಶಾನ್ಯ ಭಾರತದಲ್ಲಿ, ಮುಂದಿನ ಆರು ದಿನಗಳಲ್ಲಿ ಈ ಸ್ಥಿತಿ ಮುಂದುವರಿಯಲಿದ್ದು, ಗಂಟೆಗೆ 50 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದೆ. ಪೂರ್ವ ಭಾರತದ ಜಾರ್ಖಂಡ್, ಪಶ್ಚಿಮ ಬಂಗಾಳ, ಒಡಿಶಾ ಮತ್ತು ಬಿಹಾರದಲ್ಲಿ ನಾಳೆಯವರೆಗೆ ಇದೇ ಪರಿಸ್ಥಿತಿ ಇರಲಿದೆ.

ಪಶ್ಚಿಮ ಮತ್ತು ದಕ್ಷಿಣ ಭಾರತದಲ್ಲಿ, ಇಂದು ಆಂಧ್ರಪ್ರದೇಶ, ನಾಳೆ ತಮಿಳುನಾಡು, ಪುದುಚೇರಿ, ತೆಲಂಗಾಣ ಹಾಗೂ ಮಹಾರಾಷ್ಟ್ರ ಮತ್ತು ಕೇರಳದಲ್ಲಿ ಈ ತಿಂಗಳ 12 ರವರೆಗೆ ಇದೇ ಹವಾಮಾನ ಮುಂದುವರಿಯಲಿದೆ. ಮುಂದಿನ 6 ದಿನ, ಉತ್ತರಾಖಂಡದಲ್ಲಿ ಲಘು ಮಳೆ ಮತ್ತು ಹಿಮಪಾತವಾಗುವ ಸಂಭವವಿದ್ದು, ಒಡಿಶಾ, ಮಧ್ಯಪ್ರದೇಶ, ಮಹಾರಾಷ್ಟ್ರ ಮತ್ತು ಛತ್ತೀಸ್ ಗಢದಲ್ಲಿ ಇಂದು ಆಲಿಕಲ್ಲು ಮಳೆಯಾಗುವ ನಿರೀಕ್ಷೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

*******************

ಸ್ಲೋವಾಕಿಯಾದಲ್ಲಿ ಜನಪ್ರಿಯ ಅಭ್ಯರ್ಥಿ ಪೀಟರ್ ಪೆಲ್ಲೆಗ್ರಿನಿ ಕಳೆದ ರಾತ್ರಿ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದಾರೆ.

ರಷ್ಯಾದೊಂದಿಗೆ ಉತ್ತಮ ಸಂಬಂಧ ಹೊಂದಿರುವ ಪೆಲ್ಲೆಗ್ರಿನಿ, ಪಾಶ್ಚಿಮಾತ್ಯ ಪರ ಅಭ್ಯರ್ಥಿ ಇವಾನ್ ಕೊರ್ಕೋಕ್ ಅವರನ್ನು ಶೇಕಡ 53ರಷ್ಟು ಮತಗಳಿಂದ ಸೋಲಿಸಿದ್ದಾರೆ.

*******************

ಐಪಿಎಲ್ ಟಿ–20 ಕ್ರಿಕೆಟ್ ಟೂರ್ನಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಅಪರಾಹ್ನ 3.30 ಕ್ಕೆ ನಡೆಯಲಿರುವ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ.

ಲಕ್ನೊದ ಏಕನಾ ಕ್ರಿಕೆಟ್ ಮೈದಾನದಲ್ಲಿ ರಾತ್ರಿ 7.30ಕ್ಕೆ ಆರಂಭವಾಗಲಿರುವ ಮತ್ತೊಂದು ಪಂದ್ಯದಲ್ಲಿ ಲಖನೌ ಸೂಪರ್ ಜಯಂಟ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಸೆಣಸಲಿವೆ.

ನಿನ್ನೆ ರಾತ್ರಿ ಜೈಪುರದ ಸವಾಯಿ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡ 6 ವಿಕೆಟ್ ಗಳಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸೋಲಿಸಿತು.

ಇದರೊಂದಿಗೆ ಆಡಿದ ನಾಲ್ಕೂ ಪಂದ್ಯಗಳಲ್ಲಿ ಅಜೇಯ ದಾಖಲೆ ಕಾಯ್ದುಕೊಂಡಿರುವ ರಾಜಸ್ಥಾನ್ ರಾಯಲ್ಸ್ ತಂಡ, ಒಟ್ಟು 8 ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಮುಂದುವರಿದಿದೆ.

ಸತತ ಮೂರನೇ ಸೋಲಿಗೆ ಗುರಿಯಾಗಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಆಡಿದ ಐದು ಪಂದ್ಯಗಳಲ್ಲಿ ಕೇವಲ 2 ಅಂಕ ಹೊಂದಿದ್ದು, ಪಟ್ಟಿಯಲ್ಲಿ 8ನೇ ಸ್ಥಾನದಲ್ಲಿದೆ.

*******************

ಆಸ್ಟ್ರೇಲಿಯಾದ ಪರ್ತ್‌ನಲ್ಲಿ ನಡೆಯುತ್ತಿರುವ ಐದು ಪಂದ್ಯಗಳ ಹಾಕಿ ಸರಣಿಯ ದ್ವಿತೀಯ ಪಂದ್ಯದಲ್ಲಿಂದು ಭಾರತ ಮತ್ತು ಆಸ್ಟ್ರೇಲಿಯಾ ತಂಡಗಳು ಮುಖಾಮುಖಿಯಾಗಲಿವೆ.

ಭಾರತೀಯ ಕಾಲಮಾನ ಮಧ್ಯಾಹ್ನ 2.30ಕ್ಕೆ ಪಂದ್ಯ ಆರಂಭವಾಗಲಿದೆ. ಮುಂಬರುವ ಒಲಿಂಪಿಕ್ಸ್ ಟೂರ್ನಿಗೆ ಇದು ಪೂರ್ವ ಸಿದ್ಧತಾ ಟೂರ್ನಿಯಾಗಿದೆ.

**********ಮುಕ್ತಾಯ*********